ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ

**KARNATAKA LEGISLATIVE ASSEMBLY, RESEARCH AND REFERENCE BRANCH**

**ಪತ್ರಿಕಾ ತುಣುಕುಗಳು**

**PAPER CLIPPINGS**

19

ಇಲಾಖೆ / ವಿಷಯ : DEPARTMENT / SUBJECT: ಕಂದಾಯ

ಪತ್ರಿಕೆಯ ಹೆಸರು : NAME OF THE NEWS PAPER: ಪ್ರಜಾವಾಣಿ          ದಿನಾಂಕ : DATE: 21/8/2020

# ಬಗರ್‌ಹುಕುಂ ಅವಧಿ ವಿಸ್ತರಣೆ

ಪ್ರ.ವಾ. 21-8-20

ಬೆಂಗಳೂರು: ಬಗರ್‌ಹುಕುಂ ಸಾಗುವಳಿ ಮಾಡುತ್ತಿರುವವರು ಮಂಜೂರಾತಿಗಾಗಿ ಅರ್ಜಿ ಸಲ್ಲಿಸುವ ಅವಧಿಯನ್ನು ಮತ್ತೆ ಎರಡು ವರ್ಷ ವಿಸ್ತರಿಸಲು ರಾಜ್ಯ ಸರ್ಕಾರ ನಿರ್ಧರಿಸಿದೆ.

'ಕರ್ನಾಟಕ ಭೂ ಮಂಜೂರಾತಿ (ಎರಡನೇ ತಿದ್ದುಪಡಿ) ನಿಯಮಗಳು -2020'ಕ್ಕೆ ಗುರುವಾರ ನಡೆದ ಸಚಿವ ಸಂಪುಟ ಸಭೆ ಒಪ್ಪಿಗೆ ನೀಡಿದೆ.

ಬಗರ್ ಹುಕುಂ ಸಾಗುವಳಿ ಮಾಡುತ್ತಿರುವವರು ಮಂಜೂರಾತಿಗೆ ಕೋರಿ ನಮೂನೆ 50ರಲ್ಲಿ ಅರ್ಜಿ ಸಲ್ಲಿಸಲು ಒಂದು ವರ್ಷ ಅವಕಾಶ ವಿಸ್ತರಿಸಲಾಗಿತ್ತು. ಆ ಬಳಿಕ ಸರ್ಕಾರಗಳು ಬದಲಾದವು. 50 ರ ಅಡಿ ಸಲ್ಲಿಕೆಯಾಗಿರುವ ಅರ್ಜಿಗಳ ಇತ್ಯರ್ಥವಾಗಿಲ್ಲ. ಇನ್ನಷ್ಟು ಅವಕಾಶ ಬೇಕು ಎಂಬ ಬೇಡಿಕೆ ಇದ್ದುದರಿಂದ ಅವಧಿ ವಿಸ್ತರಣೆ ಮಾಡಲು ನಿರ್ಧರಿಸಲಾಯಿತು ಎಂದು ಸಚಿವ ಮಾಧುಸ್ವಾಮಿ ತಿಳಿಸಿದರು.